## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1701 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್.ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 14-03-2022 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯದ ಗಡಿ ಪ್ರದೇಶಗಳಾವುವು; ಗಡಿ ಪ್ರದೇಶಗಳಲ್ಲಿ ಕನ್ನಡ ಅಭಿವೃದ್ಧಿಗಾಗಿ ಕೈಗೊಂಡಿರುವ ಕಾರ್ಯಕ್ರಮಗಳೇನು; | ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಒಳಪಡುವ ರಾಜ್ಯದ 19 ಗಡಿ ಜಿಲ್ಲೆಗಳ 63 ಗಡಿ ತಾಲ್ಲೂಕುಗಳ ಪಟ್ಟಿಯನ್ನು ಲಗತ್ತಿಸಿದೆ.<br>ಗಡಿ ಪ್ರದೇಶಗಳಲ್ಲಿ ಕನ್ನಡ ಅಭಿವೃದ್ಧಿಗಾಗಿ ವಿವಿಧ ಅಭಿವೃದ್ಧಿ ಕಾಮಗಾರಿಗಳಾದ ಕನ್ನಡ ಶಾಲೆಗಳಲ್ಲಿ ಸಾಂಸ್ಕೃತಿಕ ಭವನ, ಬಯಲುರಂಗ ಮಂದಿರ, ಕಂಪ್ಯೂಟರ್ ಕೊಠಡಿ, ಗ್ರಂಥಾಲಯ, ಶಾಲಾ ಕೊಠಡಿ, ಕ್ರೀಡಾ ಕೊಠಡಿ, ಶಾಲಾ ಕಾಂಪೌಂಡ್/ ಶೌಚಾಲಯ, ಆಟದ ಮೈದಾನ, ಇವುಗಳ ನಿರ್ಮಾಣಕ್ಕಾಗಿ ಹಾಗೂ ಗಣಕಯಂತ್ರ ಕೊಠಡಿ/ ಗಣಕಯಂತ್ರ ಖರೀದಿ ಹಾಗೂ ಸಂಘ ಸಂಸ್ಥೆಗಳಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಅನುದಾನ ನೀಡಿ ಅನುಷ್ಠಾನಗೊಳಿಸಲಾಗುತ್ತಿದೆ. |
| ಆ) | ಗಡಿ ಪ್ರದೇಶಗಳಲ್ಲಿ ಕನ್ನಡ ಭಾಷೆ ಅಭಿವೃದ್ಧಿಗಾಗಿ ಎಷ್ಟು ಕನ್ನಡ ಶಾಲೆಗಳನ್ನು ತೆರೆಯಲಾಗಿದೆ; ಇವುಗಳಿಗೆ ನೀಡಿರುವ ಮೂಲಭೂತ ಸೌಕರ್ಯಗಳೇನು; | ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಅನುದಾನದ ಕೊರತೆ ಹಿನ್ನಲೆಯಲ್ಲಿ ಯಾವುದೇ ಹೊಸ ಶಾಲೆಗಳನ್ನು ತೆರೆಯಲಾಗಿರುವುದಿಲ್ಲ. |
| | ಹೊರನಾಡು ಕನ್ನಡಿಗರ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಹೊರನಾಡು ಕನ್ನಡಿಗರ ಸಮಸ್ಯೆಗಳನ್ನು ಪರಿಹರಿಸಲು ಆರ್ಥಿಕ ಇತಿಮಿತಿಯಲ್ಲಿ ಗಡಿ ಪ್ರಾಧಿಕಾರದ ವತಿಯಿಂದ ಗಡಿ ಕನ್ನಡ ಪ್ರದೇಶಗಳ ಸಂಘ-ಸಂಸ್ಥೆಗಳಿಗೆ ಹಾಗೂ ಗಡಿ ಕನ್ನಡ ಶಾಲೆಗಳಲ್ಲಿ ಸಾಂಸ್ಕೃತಿಕ ಭವನ, ಬಯಲು ರಂಗ ಮಂದಿರ, ಕಂಪ್ಯೂಟರ್ ಕೊಠಡಿ, ಗ್ರಂಥಾಲಯ, ಶಾಲಾ ಕೊಠಡಿ, ಕ್ರೀಡಾ ಕೊಠಡಿ, ಶಾಲಾ ಕಂಪೌಂಡ್/ ಶೌಚಾಲಯ, ಆಟದ ಮೈದಾನ, ಇವುಗಳ ನಿರ್ಮಾಣಕ್ಕಾಗಿ ಹಾಗೂ ಗಣಕಯಂತ್ರ ಕೊಠಡಿಗಳಿಗಾಗಿ ಜಿಲ್ಲಾಧಿಕಾರಿಗಳ ಮೂಲಕ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. |

ಸಂಖ್ಯೆ: ಕಸಂಮಾ 37 ಕೆಒಎಲ್ 2022.

**(ವಿ.ಸುನಿಲ್ ಕುಮಾರ್)**
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು